**ಸಾಕ್ಷಿಯನ್ನು ಕರೆಸಲಾಯಿತು. ಪ್ರಮಾಣ ವಚನ ಮಾಡಿಸಲಾಯಿತು.**

**ದಿಃ10-06-2026**

**ಮುಂದುವರೆದ ಪಾಟೀ ಸವಾಲುಃ ದೂರುದಾರರ ಪರ ಶ್ರೀಮತಿ ಎಸ್ ಕೆ ವಕೀಲರಿಂದಃ**

ನಾನು ಮಾನ್ವಿ ತಾಲ್ಲೂಕಿಗೆ ವರ್ಗಾವಣೆ ಆಗುವ ಪೂರ್ವದಲ್ಲಿ ನನಗೆ ನೋಟೀಸ ಬಂದಿತ್ತು. ಆದರೆ ಪ್ರಕರಣ ದಾಖಲಾಗಿರಲಿಲ್ಲ. ಈ ಪ್ರಕರಣ 2021 ರಲ್ಲಿ ದಾಖಲಾಗಿರುತ್ತದೆ ಎಂದರೆ ಸರಿಯಲ್ಲ. ಈ ನ್ಯಾಯಾಲಯದಲ್ಲಿ ನನ್ನ ವಿರುದ್ಧ 4-5 ಕೇಸ ಗಳು ದಾಖಲಾಗಿರುತ್ತದೆ ಎಂದರೆ ಸರಿ. ನಾನು ಸಕಲೇಶಪುರದಲ್ಲಿ ಹಲವಾರು ಜನರಿಂದ ಸಾಲ ಪಡೆದು ಮೋಸ ಮಾಡುವ ಉದ್ದೇಶದಿಂದ ಮಾನ್ವಿ ತಾಲ್ಲೂಕಿಗೆ ವರ್ಗಾವಣೆ ಮಾಡಿಸಿಕೊಂಡಿರುತ್ತೇನೆ ಎಂದರೆ ಸರಿಯಲ್ಲ. ಹೊಣೆಗಾರಿಗೆಯಿಂದ ತಪ್ಪಿಸಿಕೊಳ್ಳಲು ಸುಳ್ಳು ಮರುತ್ತರ ನೀಡಿರುತ್ತೇನೆ ಎಂದರೆ ಸರಿಯಲ್ಲ. ನಾನು ಮೋಹನ್ ಮತ್ತು ಸುಬ್ಬಯ್ಯ ರವರಿಗೆ ನಗದು ರೂಪದಲ್ಲಿ ಹಣ ನೀಡಿರುತ್ತೇನೆ. ನೇರವಾಗಿ ದೂರುದಾರರಿಗೆ ಹಣ ಮರುಪಾವತಿ ಮಾಡಿಲ್ಲ. ನಾನು ಹಣ ಮರುಪಾವತಿ ಮಾಡಿದ ಬಗ್ಗೆ ದಾಖಲಾತಿ ಹಾಜರುಪಡಿಸಿಲ್ಲ. ಸುಳ್ಳು ಮರುತ್ತರ ನೀಡಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರುವಿಚಾರಣೆಃ ಇಲ್ಲ**

**ಉಕ್ತ ಲೇಖನದಂತೆ ಮುಕ್ತ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.**

**ಓ ಹೆ ಕೇ ಸ ಇ**

ಸಹಿ/-

**ಪ್ರಧಾನ ಸಿವಿಲ್ ನ್ಯಾಯಾಧೀಶರು**
**ಮತ್ತು ಜೆ.ಎಂ.ಎಫ್.ಸಿ ಸಕಲೇಶಪುರ**